## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್ ಬುಡ್ನಾ ಸಿದ್ದಿ, ರವರು ನಿಯಮ-330 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ**: ರಾಜ್ಯದಲ್ಲಿ ಗ್ರಾಮ ಪಂಚಾಯತ್ ನೌಕರರನ್ನು ಸಿ ಮತ್ತು ಡಿ ದರ್ಜೆಗೆ ಮೇಲ್ದರ್ಜೆಗೇರಿಸುವಂತೆ ಮತ್ತು ಸಿ ಮತ್ತು ಡಿ ಗ್ರೂಪ್ ನೌಕರರಿಗೆ ಇರುವಂತೆ ಪಂಚಾಯತ್ ನೌಕರರಿಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಯಾರಿಸಿ ಅನುಷ್ಠಾನಗೊಳಿಸುವಂತೆ ರಾಜ್ಯ ಸರ್ಕಾರ ಮತ್ತು ಇಲಾಖೆಯನ್ನು ಒತ್ತಾಯಿಸಿ ರಾಜ್ಯದ ಮಟ್ಟದ ಹೋರಾಟ ನಡೆದಿರುವುದರ ಕುರಿತು ಮತ್ತು ಗ್ರಾಮ ಪಂಚಾಯತಿ ನೌಕರರ ವೇತನ ಹೆಚ್ಚಳಿಕೆ ಮಾಡಬೇಕಾಗಿರುವ ಕುರಿತು.

***

**ಉತ್ತರ**: ಭಾರತ ಸಂವಿಧಾನದ ಅನುಚ್ಛೇದ 242-ಬಿ ರಂತೆ ಗ್ರಾಮ ಪಂಚಾಯಿತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯಿತಿಯು ಸ್ಥಳೀಯ ಪ್ರಾಧಿಕಾರವಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

ಮಂಜೂರಾದ ಹುದ್ದೆಗಳಿಗೆ ಗ್ರಾಮ ಪಂಚಾಯಿತಿಯು ಪ್ರಕರಣ 113 ರಂತೆ ನೇಮಕಾತಿ ಮಾಡಿಕೊಂಡು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆದುಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯಿತಿಯ ಖಾಯಂ ನೌಕರರಾಗಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಲ್ಲಿ, ಗ್ರಾಮ ಪಂಚಾಯಿತಿಯು ನೌಕರರನ್ನು ನೇಮಕ ಮಾಡಿಕೊಂಡು ತಮ್ಮ ಸ್ವಂತ ಸಂಪನ್ಮೂಲದಿಂದ ವೇತನವನ್ನು ಪಾವತಿಸಬೇಕಾಗಿರುತ್ತದೆ. ಗ್ರಾಮ ಪಂಚಾಯಿತಿಗಳು ಸರ್ಕಾರದ ಮಾರ್ಗಸೂಚಿ ಅನುಸರಿಸದೆ ಹೆಚ್ಚಿನ ಸಿಬ್ಬಂದಿಗಳನ್ನು ನೇಮಿಸಿಕೊಂಡಿದ್ದರಿಂದ ಅವರಿಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಸುತ್ತಿರಲಿಲ್ಲ. ಗ್ರಾಮ ಪಂಚಾಯತ್ ಸಿಬ್ಬಂದಿಗಳು ತಮಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಯಾಗದಿರುವ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದನ್ನು ಪರಿಗಣಿಸಿ ಮಾರ್ಚ್ 2018 ರಿಂದ ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಸರ್ಕಾರದ ವತಿಯಿಂದಲೇ ಕನಿಷ್ಠ ವೇತನ ಪಾವತಿಸಲಾಗುತ್ತಿದೆ. ಕಾರ್ಮಿಕ ಇಲಾಖೆಯು ಗ್ರಾಮ ಪಂಚಾಯಿತಿ ನೌಕರರಿಗೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನವನ್ನು ನೀಡಲಾಗುತ್ತದೆ.

ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಗ್ರಾಮ ಪಂಚಾಯತಿಯು ಪಾವತಿಸುತ್ತಿದೆ. ಪ್ರಸ್ತುತ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ ಈ ಕೆಳಕಂಡಂತಿದೆ.

| ಕ್ರ. ಸಂ | ಪದನಾಮ | ಕನಿಷ್ಠ ವೇತನ ನೀಡುತ್ತಿರುವ ವಿವರ (ರೂ.ಗಳಲ್ಲಿ) | ವ್ಯತ್ಯಾಸವಾಗುವ ತುಟ್ಟಿಭತ್ಯೆ (ರೂ.ಗಳಲ್ಲಿ) | ಒಟ್ಟು (ರೂ.ಗಳಲ್ಲಿ) |
|---|---|---|---|---|
| 1 | ಬಿಲ್ ಕಲೆಕ್ಟರ್ | 15,196.72 | 2223.60 | 17420.32 |
| 2 | ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ | 15,196.72 | 2223.60 | 17420.32 |
| 3 | ವಾಟರ್ ಆಪರೇಟರ್ | 13,509.32 | 2223.60 | 15732.92 |
| 4 | ಅಟೆಂಡೆಂಟ್ | 12,873.52 | 2223.60 | 15097.12 |
| 5 | ಕ್ಲೀನರ್ಸ್ | 16,019.52 | 2223.60 | 18243.12 |

ವೇತನದೊಂದಿಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳು ಈ ಕೆಳಕಂಡಂತಿವೆ.

1) ಗ್ರಾಮ ಪಂಚಾಯಿತಿ ನೌಕರರಿಗೆ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆ ಮತ್ತು ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ನೀಡಲಾಗುತ್ತದೆ.

2) ಗ್ರಾಮ ಪಂಚಾಯಿತಿ ಸಿಬ್ಬಂದಿಯು ಸೇವೆಯಲ್ಲಿದ್ದಾಗ ಮರಣ ಹೊಂದಿದಲ್ಲಿ ಅವರ ನ್ಯಾಯಬದ್ಧ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

3) ಪ್ರಸ್ತುತ ಸೇವೆಯಿಂದ ನಿವೃತ್ತಿಯಾಗುವ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.

4) ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10.000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಅವಕಾಶ ಕಲ್ಪಿಸಲಾಗಿದೆ.

5) ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾದಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಟಿಯಿಂದ ಈ ಕೆಳಕಂಡ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿಯ ವಿಮಾ ಪಾಲಿಸಿಗಳನ್ನು ಕಡ್ಡಾಯವಾಗಿ ಮಾಡಿಸಲು ಮತ್ತು ಸಂಬಂಧಿಸಿದ ಸಿಬ್ಬಂದಿಗಳ ವೇತನದ ಬ್ಯಾಂಕ್ ಖಾತೆಗೆ ಲಿಂಕ್ ಮಾಡಿಸಿ, ವಾರ್ಷಿಕವಾಗಿ ಕಟಾವಣೆ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ.

   1) ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ
   2) ಪ್ರಧಾನ ಮಂತ್ರಿ ಸುರಕ್ಷಾ ಜ್ಯೋತಿ ಭೀಮಾ ಯೋಜನೆ
   3) ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಫರ್ಸನಲ್ ಆಕ್ಸಿಡೆಂಟ್ ಇನ್‌ಶ್ಯೂರೆನ್ಸ್

6) 2020 ರ ಕೋವಿಡ್ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಕೋವಿಡ್ ನಿಯಂತ್ರಣಕ್ಕಾಗಿ ಶ್ರಮಿಸುತ್ತಿದ್ದ ವೇಳೆ ಕೋವಿಡ್ ಸೋಂಕಿನಿಂದ ಮೃತಪಟ್ಟ ಸಂದರ್ಭದಲ್ಲಿ ಸರ್ಕಾರವು ಅವರಿಗೆ 30 ಲಕ್ಷ ರೂ ಪರಿಹಾರ ಘೋಷಿಸಿತ್ತು. ಘೋಷಿಸಲಾದ ಪರಿಹಾರ ಪಾವತಿಗೆ ಪ್ರತ್ಯೇಕ ಲೆಕ್ಕ ಶೀರ್ಷಿಕೆ ಇರಲಿಲ್ಲ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತ್ ನೌಕರರು ಕೋವಿಡ್-19 ಕರ್ತವ್ಯ ನಿರ್ವಹಿಸುತ್ತಿದ್ದಾಗ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮರಣ ಹೊಂದಿದ್ದಲ್ಲಿ ಅವರ ಕುಟುಂಬದವರಿಗೆ 30 ಲಕ್ಷ ರೂ. ಪರಿಹಾರ ನೀಡಲು ಅಥವಾ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಅನಾರೋಗ್ಯಗೊಂಡಲ್ಲಿ ಸದರಿ ಚಿಕಿತ್ಸೆಗಾಗಿ ತಗಲುವ ವೈದ್ಯಕೀಯ ವೆಚ್ಚ ಭರಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಶ್ವಾಸನೆ ನಿಧಿಯನ್ನು ಸ್ಥಾಪಿಸಿ ಪರಿಹಾರ ನೀಡಲು ತಿಳಿಸಲಾಗಿದೆ.

7) ಗ್ರಾಮ ಪಂಚಾಯತಿ ನೌಕರರಿಗೆ ತೀವ್ರ ಸ್ವರೂಪದ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್, ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್, ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಾಯಿಲೆಗಳಿಗೆ ತುರ್ತಾದಲ್ಲಿ ವೈದ್ಯಕೀಯ ವೆಚ್ಚ ಗರಿಷ್ಠ ರೂ. 50,000/- ಗಳನ್ನು ಪಾವತಿಸಲು ಆದೇಶಿಸಲಾಗಿದೆ.

8) ಬಿಲ್ ಕಲೆಕ್ಟರ್ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್/ ಅಟೆಂಡೆಂಟ್/ ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

9) ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ / ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಸೇವೆಯೊಳಗಿನ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಿಗನುಸಾರವಾಗಿ ಬಿಲ್‌ಕಲೆಕ್ಟರ್ / ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ನೌಕರರಿಂದ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ.

ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸೇವಾ ಹಿರಿತನದ ವೇತನ ನಿಗಧಿಪಡಿಸಲು ಮತ್ತು ವೇತನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಗ್ರಾಮ ಪಂಚಾಯಿತಿ ನೌಕರರು ಸರ್ಕಾರಿ ನೌಕರರಾಗಿರುವುದಿಲ್ಲ. ಸದರಿ ನೌಕರರಿಗೆ 'ಸಿ' ಮತ್ತು 'ಡಿ' ದರ್ಜೆ ನೌಕರರಂತೆ ವೇತನ ಶ್ರೇಣಿ ನಿಗದಿಪಡಿಸಲು ಆಡಳಿತಾತ್ಮಕವಾಗಿ ಸಾಧ್ಯವಾಗುವುದಿಲ್ಲ.

**ಸಂಖ್ಯೆ: ಗ್ರಾಅಪ 682 ಗ್ರಾಪಂಅ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.